ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE :

# ಠಾಣೆಗೆ ಬಾರದ ಕಲ್ಲಹಳ್ಳಿ, ಮುಲಾಲಿ

## ಪೂರ್ವ ನಿಯೋಜಿತ ಕಾರ್ಯಕ್ರಮ ನೆಪ ಲೈಂಗಿಕ ದೌರ್ಜನ್ಯ ವಿವಾದ ಪ್ರಕರಣ

ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಮಾಜಿ ಸಚಿವರ ಲೈಂಗಿಕ ವಿವಾದ ಸಂಬಂಧ ಸೋಮವಾರ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಗೆ ಸಾಮಾಜಿಕ ಕಾರ್ಯಕರ್ತರಾದ ದಿನೇಶ್ ಕಲ್ಲಹಳ್ಳಿ ಮತ್ತು ರಾಜಶೇಖರ್ ಮುಲಾಲಿ ಗೈರು ಆಗಿದ್ದಾರೆ.

ಮಾಜಿ ಸಚಿವರ ವಿರುದ್ಧ ನೀಡಿದ್ದ ಲೈಂಗಿಕ ದೌರ್ಜನ್ಯ ದೂರಿನ ಸಂಬಂಧ ತಮ್ಮ ವಕೀಲರ ಮೂಲಕ ಕಬ್ಬನ್ ಪಾರ್ಕ್ ಠಾಣೆಗೆ ಪತ್ರ ಕಳುಹಿಸಿ ದೂರು ಹಿಂಪಡೆಯುತ್ತಿರುವುದಾಗಿ ದಿನೇಶ್ ಕಲ್ಲಹಳ್ಳಿ ಹೇಳಿದ್ದರು. ಈ ವೇಳೆ ಕ್ರಿಮಿನಲ್ ಕೇಸ್ ಆಗಿರುವ ಕಾರಣ ದೂರುದಾರರೇ ಖುದ್ದು ಠಾಣೆಗೆ ಬರುವಂತೆ ಇನ್‌ಸ್ಪೆಕ್ಟರ್ ಬಿ.ಮಾರುತಿ, ಕಲ್ಲಹಳ್ಳಿ ಪರ ವಕೀಲರಿಗೆ ತಿಳಿಸಿದ್ದರು.



ಈ ಕುರಿತು 'ವಿಜಯವಾಣಿ' ಜತೆ ಮಾತನಾಡಿದ ದಿನೇಶ್ ಕಲ್ಲಹಳ್ಳಿ, ದೂರು ವಾಪಸ್ ಪಡೆಯಲು ಠಾಣೆಗೆ ಬರುವಂತೆ ನನಗೆ ಪೊಲೀಸರು ಸೂಚಿಸಿಲ್ಲ. ಹೇಳಿದರೂ 3 ದಿನ ಸಮಯ ಇಲ್ಲ. ಆನಂತರ ಠಾಣೆಗೆ ತೆರಳಿ ಹೇಳಿಕೆ ನೀಡುವುದಾಗಿ ಕಲ್ಲಹಳ್ಳಿ ತಿಳಿಸಿದ್ದಾರೆ.

ಮತ್ತೊಂದೆಡೆ 19 ರಾಜಕಾರಣಿಗಳ ಸೆಕ್ಸ್ ಸಿಡಿ ಇರುವುದಾಗಿ ಹೇಳಿಕೆ ನೀಡಿದ್ದ ರಾಜಶೇಖರ್ ಮುಲಾಲಿಗೆ ಸೋಮವಾರ ವಿಚಾರಣೆಗೆ ಬರುವಂತೆ ಪೊಲೀಸರು ನೋಟಿಸ್ ಜಾರಿ ಮಾಡಿದ್ದರು. ವಿಚಾರಣೆಗೆ ಗೈರು ಆಗಿರುವ ರಾಜಶೇಖರ್, ನನಗೆ ಪೂರ್ವ ನಿಯೋಜಿತ ಕಾರ್ಯಕ್ರಮ ಇದ್ದ ಕಾರಣಕ್ಕೆ ವಿಚಾರಣೆಗೆ ಬರಲು ಸಾಧ್ಯವಿಲ್ಲ ಎಂದು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

### ದಿನೇಶ್ ಕಲ್ಲಹಳ್ಳಿ ವಿರುದ್ಧ 4ನೇ ದೂರು

ದಿನೇಶ್ ಕಲ್ಲಹಳ್ಳಿ ವಿರುದ್ಧ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಗೆ 4ನೇ ದೂರು ನೀಡಲಾಗಿದೆ. ಮಹಿಳೆ ಅನುಮತಿ ಇಲ್ಲದೆ ಅಶ್ಲೀಲ ವಿಡಿಯೋ ಬಹಿರಂಗಪಡಿಸಿದ ದಿನೇಶ್ ಕಲ್ಲಹಳ್ಳಿ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಕರ್ನಾಟಕ ಸಂಘಟನೆಗಳ ಕನ್ನಡ ಒಕ್ಕೂಟ ಅಧ್ಯಕ್ಷ ಭರತ್ ಶೆಟ್ಟಿ ದೂರು ನೀಡಿದ್ದಾರೆ. ಲೈಂಗಿಕ ದೌರ್ಜನ್ಯಕ್ಕೆ ಒಳಗಾಗಿರುವ ಮಹಿಳೆಗೆ ನ್ಯಾಯ ಒದಗಿಸುವ ನೆಪದಲ್ಲಿ ಅಶ್ಲೀಲ ವಿಡಿಯೋ ಪಡೆದ ದಿನೇಶ್ ಕಲ್ಲಹಳ್ಳಿ, ಪೊಲೀಸರಿಗೆ ದೂರು ನೀಡುವ ಜತೆಗೆ ಸೆಕ್ಸ್ ಸಿಡಿಯನ್ನು ಬಹಿರಂಗ ಪಡಿಸಿದ್ದಾರೆ. ಇದರಿಂದ ಮಹಿಳಾ ಗೌರವಕ್ಕೆ ಧಕ್ಕೆ ಉಂಟಾಗಿದೆ. ಸಚಿವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಇಷ್ಟಕ್ಕೆಲ್ಲ ಕಾರಣರಾದ ಕಲ್ಲಹಳ್ಳಿ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ದೂರಿನಲ್ಲಿ ಭರತ್ ಶೆಟ್ಟಿ ಒತ್ತಾಯಿಸಿದ್ದಾರೆ.

### ಸಂತ್ರಸ್ತೆ ಹೆಸರಿನಲ್ಲಿ ನಕಲಿ ಖಾತೆ

ಸಂತ್ರಸ್ತೆ ಹೆಸರಿನಲ್ಲಿ ಟ್ವಿಟರ್ ಮತ್ತು ಇನ್‌ಸ್ಟಾಗ್ರಾಮ್‌ನಲ್ಲಿ ನಕಲಿ ಖಾತೆ ತೆರೆದು ಆಕೆ ಫೋಟೋವನ್ನು ಅಪ್‌ಲೋಡ್ ಮಾಡಿ ಕಿಡಿಗೇಡಿಗಳು ಅಪಪ್ರಚಾರ ಮಾಡುತ್ತಿದ್ದಾರೆ ಎನ್ನಲಾಗಿದೆ. ಈಗಾಗಲೇ ವೈರಲ್ ಆಗಿರುವ ಸಂತ್ರಸ್ತೆ ಫೋಟೋ ಮತ್ತು ವಿಡಿಯೋಗಳನ್ನು ಅಪ್‌ಲೋಡ್ ಮಾಡಿದ್ದು, ಇವರ ವಿರುದ್ಧವೂ ಪೊಲೀಸರು ಕ್ರಮ ತೆಗೆದುಕೊಳ್ಳಲು ಮುಂದಾಗಿದ್ದಾರೆ.

### ಎಚ್‌ಡಿಕೆ ವಿರುದ್ಧ ದೂರು

ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ವಿರುದ್ಧ ವಂದೇಮಾತರಂ ಸಮಾಜ ಸೇವಾ ಸಂಸ್ಥೆ ರಾಜಾಧ್ಯಕ್ಷ ಸಿ.ಎಂ.ಶಿವಕುಮಾರ್ ನಾಯ್ಕ್ ಎಂಬಾತ ಕಬ್ಬನ್‌ಪಾರ್ಕ್ ಠಾಣೆಗೆ ದೂರು ನೀಡಿದ್ದಾರೆ. ಮಾಜಿ ಸಚಿವರ ಲೈಂಗಿಕ ವಿವಾದದ ಸೆಕ್ಸ್ ಸಿಡಿ 5 ಕೋಟಿ ರೂ.ಗೆ ಡೀಲ್ ನಡೆದಿದೆ ಎಂದು ಮಾಧ್ಯಮಗಳಲ್ಲಿ ಮಾಜಿ ಸಿಎಂ ಹೇಳಿಕೆ ನೀಡಿದ್ದಾರೆ. ಈ ಕುರಿತು ಎಚ್‌ಡಿಕೆ ಹೇಳಿಕೆ ಕುರಿತು ತನಿಖೆ ನಡೆಸಬೇಕು. 5 ಕೋಟಿ ಡೀಲ್‌ನಲ್ಲಿ ಇರುವ ವ್ಯಕ್ತಿಗಳನ್ನು ಪತ್ತೆಹಚ್ಚುವಂತೆ ದೂರಿನಲ್ಲಿ ಶಿವಕುಮಾರ್ ಒತ್ತಾಯಿಸಿದ್ದಾರೆ.



### ಹನಿ ಟ್ರ್ಯಾಪ್‌ಗೆ ಒಳಗಾದೀರಿ ಜೋಕೆ!

ಬೆಳಗಾವಿ: ನೆರೆಯ ಗೋವಾ ರಾಜ್ಯಕ್ಕೆ ತೆರಳುವ ಕೆಲ ಶಾಸಕರನ್ನು ಗುರಿಯಾಗಿಸಿಕೊಂಡು 'ಹನಿ ಟ್ರ್ಯಾಪ್' ಮಾಡುವ ಸಾಧ್ಯತೆಯಿದೆ. ಹೀಗಾಗಿ ನಮ್ಮ ರಾಜ್ಯದ ಶಾಸಕರು ಜಾಗೃತರಾಗಿರಬೇಕು ಎಂದು ಸಾಮಾಜಿಕ ಕಾರ್ಯಕರ್ತ ರಾಜಶೇಖರ ಮುಲಾಲಿ ಎಚ್ಚರಿಕೆ ನೀಡಿದರು. ನಗರದಲ್ಲಿ ಮಾತನಾಡಿದ ಅವರು, ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕ ಭಾಗದ ಕೆಲ ಶಾಸಕರು ತಾಂತ್ರಿಕವಾಗಿ ಅಜ್ಞಾನವಂತರಿದ್ದಾರೆ. ಹಾಗಾಗಿ ಇಂತಹ ಶಾಸಕರನ್ನೇ ದುರುಪಯೋಗ ಮಾಡಿಕೊಳ್ಳುವ ಕೆಲಸ ನಡೆಯುತ್ತಿದೆ. ಹೀಗಾಗಿ ಶಾಸಕರು ತಮ್ಮ ಸುತ್ತಮುತ್ತಲೇ ಇಟ್ಟುಕೊಳ್ಳುವ ಜನರಿಂದ ಹುಷಾರಾಗಿರಬೇಕು ಎಂದರು. ನನ್ನ ಬಳಿ ಸಿಡಿಗಳಿರುವ ಬಗ್ಗೆ ಎಲ್ಲಿಯೂ ಹೇಳಿಲ್ಲ. ಮಾಧ್ಯಮಗಳಲ್ಲಿ ಆ ರೀತಿ ಸುದ್ದಿ ಬಿತ್ತರ ಮಾಡಿದ್ದಕ್ಕೆ ಮಂಡ್ಯ ಜಿಲ್ಲೆಯ ಮಹಿಳೆಯೊಬ್ಬರು ಬೆಂಗಳೂರಿನ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದು, ಮಾ. 11ರಂದು ವಿಚಾರಣೆಗೆ ಹಾಜರಾಗುವಂತೆ ಪೊಲೀಸರು ನೋಟಿಸ್ ನೀಡಿದ್ದಾರೆ ಎಂದು ತಿಳಿಸಿದರು.

